# ಕರ್ನಾಟಕ ಸರ್ಕಾರ

## ಕಂದಾಯ ಇಲಾಖೆ

## ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ

---

ವಿಷಯ:- ಕರೋನಾ ವೈರಸ್ ಹರಡಂತೆ ಸಾರ್ವಜನಿಕರ ಆರೋಗ್ಯ ಕಾಪಾಡುವ ಹಿತದೃಷ್ಟಿಯಿಂದ ದಿ:೨೪-೦೫-೨೦೨೦ ರಂದು ಮತ್ತು ೩೧-೦೫-೨೦೨೦ ರಂದು ಚಿತ್ರದುರ್ಗ ಜಿಲ್ಲೆಯಾದ್ಯಂತ ಮುಂಜಾಗ್ರತಾ ಕ್ರಮವಾಗಿ ಲಾಕ್‌ಡೌನ್ ವಿಧಿಸಿ ಆದೇಶ ಹೊರಡಿಸುವ ಬಗ್ಗೆ.

ಉಲ್ಲೇಖ:
೧) ಮುಖ್ಯ ಕಾರ್ಯದರ್ಶಿಗಳು ಹಾಗೂ ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಕಾರ್ಯಕಾರಿ ಸಮಿತಿ ಅಧ್ಯಕ್ಷರು ರವರ ಆದೇಶ ಸಂಖ್ಯೆ:ಕಂಇ ೧೫೮ ಟಿಎನ್‌ಆರ್ ೨೦೨೦ ದಿ:೧೮-೦೫-೨೦೨೦.
೨) ಈ ಕಛೇರಿಯ ಸಮ ಸಂಖ್ಯೆ ಆದೇಶ ದಿ:೨೨-೦೫-೨೦೨೦

$$$$$$$$

**ಪ್ರಸ್ತಾವನೆ:**

ಕರೋನಾ ವೈರಸ್‌ನಿಂದಾಗಿ ಸಂಭವಿಸಬಹುದಾದ ಅನಾಹುತಗಳನ್ನು ತಡೆಗಟ್ಟಲು ಸರ್ಕಾರವು ಉಲ್ಲೇಖದ ಆದೇಶದಂತೆ ದಿ:೩೧-೦೫-೨೦೨೦ ರವರೆಗೆ ಲಾಕ್‌ಡೌನ್ ಆದೇಶವನ್ನು ಸಡಿಲಗೊಳಿಸಿ ವಿಸ್ತರಿಸಿರುತ್ತದೆ. ಮುಂದುವರೆದು ಈ ಕೆಳಕಂಡಂತೆ ನಿರ್ದೇಶನ ನೀಡಿದ್ದು,

" ಪ್ರತಿದಿನ ರಾತ್ರಿ ೭-೦೦ ರಿಂದ ಬೆಳಗ್ಗೆ ೭-೦೦ ರವರೆಗೆ ಎಲ್ಲಾ ಚಟುವಟಿಕೆಗಳ ವ್ಯಕ್ತಿಗಳ ಸಂಚಾರವನ್ನು ಕಟ್ಟುನಿಟ್ಟಾಗಿ ನಿಷೇಧಿಸತಕ್ಕದ್ದು. ಭಾನುವಾರದಂದು ಹೆಚ್ಚುವರಿಯಾಗಿ ಬೆಳಗ್ಗೆ ೭-೦೦ ರಿಂದ ಸಂಜೆ ೭-೦೦ ರವರೆಗೆ ಎಲ್ಲಾ ಅವಶ್ಯಕವಲ್ಲದ ಚಟುವಟಿಕೆಗಳ ವ್ಯಕ್ತಿಗಳ ಸಂಚಾರವನ್ನು ನಿಷೇಧಿಸಿದೆ. (ಭಾನುವಾರದಂದು ಪೂರ್ಣದಿನದ ಲಾಕ್‌ಡೌನ್ ಇರುತ್ತದೆ.) ಈ ಉದ್ದೇಶಕ್ಕಾಗಿ ಸಿ.ಆರ್.ಪಿ.ಸಿ ಸೆಕ್ಷನ್ ೧೪೪ ರಡಿಯಲ್ಲಿ ನಿಷೇಧಾತ್ಮಕ ಆದೇಶ (ಕರ್ಫ್ಯೂ)ವನ್ನು ಸ್ಥಳೀಯ ಪ್ರಾಧಿಕಾರಗಳ ವತಿಯಿಂದ ಆದೇಶಗಳನ್ನು ಹೊರಡಿಸಿ, ಕಟ್ಟುನಿಟ್ಟಿನ ಅನುಪಾಲನೆಯನ್ನು ಖಾತರಿಪಡಿಸತಕ್ಕದ್ದು " ಎಂದಿರುತ್ತದೆ.

ಪ್ರಯುಕ್ತ ಉಲ್ಲೇಖ (೨) ರಂತೆ ಸಂಪೂರ್ಣ ಲಾಕ್‌ಡೌನ್ ವಿಧಿಸಿ ಹೊರಡಿಸಿರುವ ಆದೇಶವನ್ನು ಮಾರ್ಪಡಿಸಿ ಈ ಕೆಳಕಂಡಂತೆ ಪರಿಷ್ಕರಿಸಿ ಆದೇಶಿಸಿದೆ.

**:ಪರಿಷ್ಕೃತ ಆದೇಶ:**

ಸಂಖ್ಯೆ:ಎಂ.ಎ.ಜಿ(೩) ಸಿಆರ್- ೧೪೪/೨೦೧೯-೨೦ — ದಿನಾಂಕ:೨೩-೦೫-೨೦೨೦.

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳ ಹಿನ್ನಲೆಯಲ್ಲಿ ಆರ್.ವಿನೋತ್ ಪ್ರಿಯಾ, ಭಾ.ಆ.ಸೇ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ, ಚಿತ್ರದುರ್ಗ ಜಿಲ್ಲೆ ಆದ ನಾನು ಚಿತ್ರದುರ್ಗ ಜಿಲ್ಲೆಯಾದ್ಯಂತ ಕೋವಿಡ್-೧೯ ಕರೋನಾ ವೈರಸ್ ಸೋಂಕು ಹರಡದಂತೆ ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ವಿಪತ್ತು ನಿರ್ವಹಣಾ ಕಾಯ್ದೆ-೨೦೦೫ ರ ಕಲಂ ೩೦ ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ದಿನಾಂಕ:೨೪-೦೫-೨೦೨೦ ಮತ್ತು ದಿನಾಂಕ:೩೧-೦೫-೨೦೨೦ ರಂದು ಚಿತ್ರದುರ್ಗ ಜಿಲ್ಲೆಯಾದ್ಯಂತ ತುರ್ತು ಆರೋಗ್ಯ ಸೇವೆಗಳು, ಔಷಧಾಲಯ (ಮೆಡಿಕಲ್ ಸ್ಟೋರ್), ಅಗ್ನಿಶಾಮಕ ಸೇವೆಗಳು, ಮತ್ತು ಅಗತ್ಯ ಸೇವೆಗಳಾದ ತರಕಾರಿ, ಹಾಲು, ಹಣ್ಣು, ಬೇಕರಿ (Sweet shops), ಮಾಂಸ ಇನ್ನಿತರೆ ಅತ್ಯವಶ್ಯಕ ಆಹಾರ ಸರಕು/ಸಾಮಗ್ರಿಗಳ ಸೇವೆಗಳಿಗೆ, ಅನುಮತಿಸಲಾದ ಕಾರ್ಯಕ್ರಮಗಳಿಗೆ ಹಾಗೂ ಶವಸಂಸ್ಕಾರಕ್ಕೆ ವಿನಾಯಿತಿ ನೀಡಿ ಅವಶ್ಯಕವಲ್ಲದ ಚಟುವಟಿಕೆಗಳ ವ್ಯಕ್ತಿಗಳ ಸಂಚಾರವನ್ನು ನಿಷೇಧಿಸಿ ಲಾಕ್‌ಡೌನ್‌ಅನ್ನು ವಿಧಿಸಿ ಆದೇಶಿಸಿರುತ್ತೇನೆ.

ಸದರಿ ಆದೇಶವನ್ನು ಉಲ್ಲಂಘಿಸುವವರ ವಿರುದ್ಧ ಭಾರತೀಯ ದಂಡ ಸಂಹಿತೆಯ ಕಲಂ ೧೮೮ ಮತ್ತು ವಿಪತ್ತು ನಿರ್ವಹಣಾ ಕಾಯ್ದೆಯಡಿ ಕ್ರಮ ಜರುಗಿಸಲಾಗುವುದು.

23/5/20

(ಆರ್.ವಿನೋತ್ ಪ್ರಿಯಾ)
ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು
ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

**ಪ್ರತಿಯನ್ನು ಈ ಕೆಳಕಂಡವರಿಗೆ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ :-**

೧) ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಒಳಾಡಳಿತ ಮತ್ತು ಸಾರಿಗೆ ಇಲಾಖೆ, ವಿಧಾನಸೌಧ, ಬೆಂಗಳೂರು ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
೨) ನಿರ್ದೇಶಕರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ಕರ್ನಾಟಕ ಸರ್ಕಾರ ಆನಂದ ರಾವ್ ವೃತ್ತ ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
೩) ಮಾನ್ಯ ಪ್ರಾದೇಶಿಕ ಆಯುಕ್ತರು ಬೆಂಗಳೂರು ವಿಭಾಗ ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
೪) ಪೋಲೀಸ್ ಅಧೀಕ್ಷಕರು, ಚಿತ್ರದುರ್ಗ ಇವರಿಗೆ ಮುಂದಿನ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
೫) ಉಪವಿಭಾಗಾಧಿಕಾರಿಗಳು, ಚಿತ್ರದುರ್ಗ ಉಪವಿಭಾಗ ರವರಿಗೆ ಮಾಹಿತಿಗಾಗಿ.
೬) ಜಿಲ್ಲೆಯ ಎಲ್ಲಾ ತಾಲ್ಲೂಕು ದಂಡಾಧಿಕಾರಿಗಳಿಗೆ.
೭) ವಾರ್ತಾ ಮತ್ತು ಪ್ರಚಾರಾಧಿಕಾರಿಗಳು, ಚಿತ್ರದುರ್ಗ ಇವರಿಗೆ ರವಾನಿಸುತ್ತಾ ಮೇಲ್ಕಂಡ ಆದೇಶವನ್ನು ಜಿಲ್ಲೆಯಲ್ಲಿನ ಎಲ್ಲಾ ಸ್ಥಳೀಯ ದಿನಪತ್ರಿಕೆಗಳಲ್ಲಿ ಸರ್ಕಾರಕ್ಕೆ ಯಾವುದೇ ವೆಚ್ಚ ಬಾರದಂತೆ ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದೆ.